ಅ) ಕೃಷ್ಣರಾಜಪೇಟೆ ಪಟ್ಟಣಕ್ಕೆ 2ನೇ ಹಂತದ ಕುಡಿಯುವ ನೀರಿನ ಯೋಜನೆಯ ಕಾಮಗಾರಿಯನ್ನು ಕೈಗೆತ್ತಿಕೊಳ್ಳುವ ಸಲುವಾಗಿ ದಿನಾಂಕ 5.7.2002ರಂದು ಟೆಂಡರ್ ಪ್ರಕಟಣೆಯನ್ನು ನೀಡಲಾಗಿದ್ದು ಗುತ್ತಿಗೆದಾರರನ್ನು ನೇಮಿಸಿದ ಕೂಡಲೇ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗುವುದು.

ಶಿವಮೊಗ್ಗ ನಗರ ಸಭೆಗೆ ಪೌರ ಕಾರ್ಮಿಕರ ನೇಮಕ

1577 (576) ಶ್ರೀ ಹೆಚ್.ಎಂ. ಚಂದ್ರಶೇಖರಪ್ಪ (ಶಿವಮೊಗ್ಗ) : ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಶಿವಮೊಗ್ಗ ನಗರದ ಜನಸಂಖ್ಯೆಗನುಗುಣವಾಗಿ ನಗರಸಭೆಗೆ ಪೌರ ಕಾರ್ಮಿಕರನ್ನು ನೇಮಕ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ? ವಿವರ ತಿಳಿಸುವುದು.

ಶ್ರೀ ಡಿ.ಕೆ. ಶಿವಕುಮಾರ್ (ನಗರಾಭಿವೃದ್ಧಿ ಸಚಿವರು) :

1) ಸರ್ಕಾರದ ಆದೇಶ ಸಂಖ್ಯೆ : ಎಫ್‌ಡಿ 01 ಬಿಇಎಂ ದಿನಾಂಕ : 23-10-98ರ ಪ್ರಕಾರ ಯಾವುದೇ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರದ ನಿಷೇಧವಿದೆ. ನಗರ ಸ್ಥಳೀಯ ಸಂಸ್ಥೆಗಳಲ್ಲಿ ಪೌರ ಕಾರ್ಮಿಕರಿಂದ ಮಾಡಿಸುತ್ತಿದ್ದ ಸ್ವಚ್ಛತ ಕೆಲಸವನ್ನು ಖಾಸಗಿಯವರಿಗೆ ಗುತ್ತಿಗೆ ನೀಡಿ ನಿರ್ವಹಿಸಬೇಕೆಂದು ಸರ್ಕಾರದ ಸುತ್ತೋಲೆ ಸಂಖ್ಯೆ : ನಆಇ 168 ಬಿಇಎಲ್ 93 ದಿನಾಂಕ : 19-11-93ರಲ್ಲಿ ನಿರ್ದೇಶಗಳಿರುವುದರಿಂದ ಸ್ಥಳೀಯ ಸಂಸ್ಥೆಗಳು ಅದರಂತೆ ಕಾರ್ಯನಿರ್ವಹಿಸುತ್ತಿವೆ. ಆದ್ದರಿಂದ ಪೌರ ಕಾರ್ಮಿಕರನ್ನು ನೇಮಕ ಮಾಡುವ ಪ್ರಶ್ನೆ ಉದ್ಭವಿಸುವುದಿಲ್ಲ.

ಶಿವಮೊಗ್ಗ – ಭದ್ರಾವತಿ ನಗರ ಪಾಲಿಕೆ ರಚಿಸುವುದು

1578 (577) ಶ್ರೀ ಚಂದ್ರಶೇಖರಪ್ಪ ಹೆಚ್.ಎಂ. (ಶಿವಮೊಗ್ಗ) : ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶಿವಮೊಗ್ಗ - ಭದ್ರಾವತಿ ಮಹಾನಗರ ಪಾಲಿಕೆ ರಚನೆ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

ಆ) ಹಾಗಿದ್ದಲ್ಲಿ, ವಿವರವನ್ನು ನೀಡುವುದು.

ಶ್ರೀ ಡಿ.ಕೆ. ಶಿವಕುಮಾರ್ (ನಗರಾಭಿವೃದ್ಧಿ ಸಚಿವರು) :

ಅ) ಇಲ್ಲ

ಆ) ಉದ್ಭವಿಸುವುದಿಲ್ಲ.

ಶಿವಮೊಗ್ಗ ನಗರ ಸಭೆ ವ್ಯಾಪ್ತಿಯಲ್ಲಿ ಅಕ್ರಮವಾಗಿ ನಿರ್ಮಿಸಿರುವ ಮನೆಗಳನ್ನು ಸಕ್ರಮಗೊಳಿಸುವುದು

1579 (578) ಶ್ರೀ ಚಂದ್ರಶೇಖರಪ್ಪ ಹೆಚ್.ಎಂ. (ಶಿವಮೊಗ್ಗ) : ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶಿವಮೊಗ್ಗ ನಗರಸಭೆ ವ್ಯಾಪ್ತಿಯಲ್ಲಿ ನಗರಸಭೆಗೆ ಸೇರಿದ ನಿವೇಶನದಲ್ಲಿ ಅಕ್ರಮವಾಗಿ ನಿರ್ಮಿಸಿರುವ ಮನೆಗಳನ್ನು ಸಕ್ರಮಗೊಳಿಸಿ ಹಕ್ಕುಪತ್ರ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

ಆ) ಹಾಗಿದ್ದಲ್ಲಿ, ಎಷ್ಟು ಮನೆಗಳನ್ನು ಸಕ್ರಮ ಮಾಡುವ ಯೋಜನೆ ಸರ್ಕಾರದ ಮುಂದಿದೆ? ವಿವರ ತಿಳಿಸಿರುವುದು.